ಎ-72 (181)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸುನೀಲ್ ಸುಬ್ರಮಣಿ ಎಂ. ಪಿ ರವರು ನಿಯಮ 72 ರ ಅಡಿಯಲ್ಲಿ ಕೇಳಲಾದ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ**

**ವಿಷಯ: ಕರ್ನಾಟಕ ರಾಜ್ಯದಲ್ಲಿ 90 ಸಾವಿರಕ್ಕೂ ಹೆಚ್ಚು ಗ್ರಾಮ ಪಂಚಾಯತ್, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್ ಸದಸ್ಯರು ಪಂಚಾಯತ್ ಪ್ರತಿನಿಧಿ ವ್ಯವಸ್ಥೆಯಡಿ ಕರ್ತವ್ಯ ನಿರ್ವಹಿಸುತ್ತಿದ್ದು ಸದರಿ ಪಂಚಾಯತ್ ಸದಸ್ಯರ ಗೌರವಧನವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ**

**ಉತ್ತರ:** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 75 ಜಿಪಸ 2014 ರನ್ವಯ 2014-15 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ನೀಡುತ್ತಿರುವ ಮಾಸಿಕ ಗೌರವಧನವನ್ನು ದಿನಾಂಕ: 01.04.2014 ರಿಂದ ಅನ್ವಯವಾಗುವಂತೆ ಇಮ್ಮಡಿಗೊಳಿಸಿ ಈ ಕೆಳಕಂಡಂತೆ ಪರಿಷ್ಕರಿಸಲಾಗಿತ್ತು.

(ರೂ.ಗಳಲ್ಲಿ)

| ಪದನಾಮ | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 1000 | 4500 | 6000 |
| ಉಪಾಧ್ಯಕ್ಷರು | 600 | 3000 | 4500 |
| ಸದಸ್ಯರು | 500 | 1500 | 3000 |

2017-18 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017ರನ್ವಯ ದಿನಾಂಕ: 01.04.2017 ರಿಂದ ಅನ್ವಯವಾಗುವಂತೆ ಈ ಕೆಳಕಂಡಂತೆ ಪರಿಷ್ಕರಿಸಿದೆ.

(ರೂ.ಗಳಲ್ಲಿ)

| ಪದನಾಮ | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 3000 | 6000 | 35000 |
| ಉಪಾಧ್ಯಕ್ಷರು | 2000 | 4000 | 15000 |
| ಸದಸ್ಯರು | 1000 | 3000 | 5000 |

ಸಂಖ್ಯೆ: ಗ್ರಾಅಪಂರಾ 158 ಜಿಪಸ 2021

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 75 ಜಿಪಸ 2014, ಬೆಂಗಳೂರು, ದಿನಾಂಕ:06-12-2014.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 75 ಜಿಪಸ 2016, ಬೆಂಗಳೂರು, ದಿನಾಂಕ:19-11-2016.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 189 ಜಿಪಸ 2016, ಬೆಂಗಳೂರು, ದಿನಾಂಕ:25-11-2016.

ಪ್ರಸ್ತಾವನೆ:

ಮೇಲೆ ಓದಲಾದ(1) ಆದೇಶದಲ್ಲಿ 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ದಿನಾಂಕ:01-04-2014 ರಿಂದ ಅನ್ವಯಿಸುವಂತೆ ಇಮ್ಮಡಿಗೊಳಿಸಿದ್ದು, ಪರಿಷ್ಕೃತ ಗೌರವಧನ ಈ ಕೆಳಕಂಡಂತಿದೆ.

| | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 1000 | 4500 | 6000 |
| ಉಪಾಧ್ಯಕ್ಷರು | 600 | 3000 | 4500 |
| ಸದಸ್ಯರು | 500 | 1500 | 3000 |

ಮೇಲೆ ಓದಲಾದ (2)ರ ಆದೇಶದಲ್ಲಿ ಎಲ್ಲಾ ಜಿಲ್ಲಾ ಪಂಚಾಯತ್‌ನ ಅಧ್ಯಕ್ಷರುಗಳಿಗೆ ಸಚಿವರ ಸ್ಥಾನಮಾನ ನೀಡಲಾಗಿದ್ದು, ಅವರ ವೇತನವನ್ನು ರೂ.35,000ಗಳಿಗೆ ಹೆಚ್ಚಿಸಲಾಗಿದೆ.

ಮೇಲೆ ಓದಲಾದ (3)ರ ಆದೇಶದಲ್ಲಿ ಎಲ್ಲಾ ಜಿಲ್ಲಾ ಪಂಚಾಯತ್‌ನ ಉಪಾಧ್ಯಕ್ಷರುಗಳ ಗೌರವಧನವನ್ನು ರೂ.15,000ಗಳಿಗೆ ಹೆಚ್ಚಿಸಲಾಗಿದೆ.

2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ದಿನಾಂಕ:01-04-2017 ರಿಂದ ಅನ್ವಯಿಸುವಂತೆ ಹೆಚ್ಚಿಸಲು ಘೋಷಣೆ ಮಾಡಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 116 ಜಿಪಸ 2017, ಬೆಂಗಳೂರು. ದಿನಾಂಕ:03-05-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವಂತೆ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಪ್ರಸ್ತುತ ನೀಡುತ್ತಿರುವ ಮಾಸಿಕ ಗೌರವಧನವನ್ನು ದಿನಾಂಕ:01-04-2017 ರಿಂದ ಅನ್ವಯಿಸುವಂತೆ ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

| | ಗ್ರಾಮ ಪಂಚಾಯತಿ | ತಾಲ್ಲೂಕು ಪಂಚಾಯತಿ | ಜಿಲ್ಲಾ ಪಂಚಾಯತಿ |
|---|---|---|---|
| ಅಧ್ಯಕ್ಷರು | 3000 | 6000 | 35000 |
| ಉಪಾಧ್ಯಕ್ಷರು | 2000 | 4000 | 15000 |
| ಸದಸ್ಯರು | 1000 | 3000 | 5000 |

ಮೇಲಿನ ವೆಚ್ಚವನ್ನು ಜಿಲ್ಲಾ ಪಂಚಾಯತ್‌ನ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಲೆಕ್ಕ ಶೀರ್ಷಿಕೆ:2515-00-101-0-35-324(2515-00-196-1-05-300), ತಾಲ್ಲೂಕು ಪಂಚಾಯತ್‌ಗೆ ಲೆಕ್ಕ ಶೀರ್ಷಿಕೆ: 2515-00-102-0-69-324(2515-00-197-1-10-300) ಹಾಗೂ ಗ್ರಾಮ ಪಂಚಾಯತ್‌ನ ಚುನಾಯಿತ ಪ್ರತಿನಿಧಿಗಳಿಗೆ ಲೆಕ್ಕ ಶೀರ್ಷಿಕೆ:2515-00-103-0-98-324(2515-00-198-1-11-300) ರಡಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

3/5/17

(ಕೆ.ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್-2)ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

3.5.17

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
6. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
7. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
10. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
11. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
12. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.